ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
Bangalore Development Authority

ಸಂಖ್ಯೆ : ಬೆಂ.ಅ.ಪ್ರಾ/ನಮ/ಅ.ಸ/ಅ.ಅ-1/ತಾ.ಸ-2/ಪೂ/32/2023-24
No.

ದಿನಾಂಕ : 10.10.2023
Date :

ಅಭಿಯಂತರ ಸದಸ್ಯರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಅನುಸೂಚಿ-ಎ 5
(ಉಪವಿಧಿ ಸಂಖ್ಯೆ:4.1)
## ನಕ್ಷೆ ಮಂಜೂರಾತಿ ಪತ್ರ

ಶ್ರೀಮತಿ/ಶ್ರೀ

M/s Mana Properties Pvt.Ltd
Swamy Legoto, No.20/7, 3rd Floor,
Kadubisanahalli, Marathahalli
Outer Ring Road
Bangalore-560 103

ಮಾನ್ಯರೆ,

ಅರ್ಜಿದಾರರಾದ ತಾವು ದಿನಾಂಕ: 08.06.2023 ರ ಅರ್ಜಿಯಲ್ಲಿ ಸಲ್ಲಿಸಿ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಕೊಡತಿ ಗ್ರಾಮದ ಸರ್ವೆ ನಂ. 60/1 ರಲ್ಲಿನ 06 ಎಕರೆ 39 ಗುಂಟೆ ವಿಸ್ತೀರ್ಣದ ಪ್ರದೇಶದಲ್ಲಿ ನಿರ್ಮಿಸುತ್ತಿರುವ ಕಟ್ಟಡಗಳಿಗೆ ನಕ್ಷೆ ಮಂಜೂರಾತಿ ನೀಡಲು ಕೋರಿರುತ್ತೀರಿ,

| ಕ್ರ.ಸಂ | ಬ್ಲಾಕ್ | ಅಂತಸ್ತು | ಎತ್ತರ | ಘಟಕಗಳು |
|---|---|---|---|---|
| 1 | ಟವರ್-1 | 3ತಳ+ನೆಲ+28ಮೇಲಂತಸ್ತು | 87.15ಮೀ | 114 |
| 2 | ಟವರ್-2 | 3ತಳ+ನೆಲ+28ಮೇಲಂತಸ್ತು | 87.15ಮೀ | 114 |

ಮೇಲ್ಕಂಡಂತೆ ಬಹುವಸತಿ ಕಟ್ಟಡಗಳಿಗೆ ನಕ್ಷೆ ಮಂಜೂರಾತಿಯನ್ನು ಮಾನ್ಯ ಆಯುಕ್ತರವರ ಕಛೇರಿ ಆದೇಶದ ಸಂಖ್ಯೆ: 3988, ದಿನಾಂಕ: 30.09.2023 ರಂದು ಅನುಮೋದನೆ ನೀಡಿದ್ದು, ನಕ್ಷೆ ಮಂಜೂರಾತಿ ಶುಲ್ಕಗಳನ್ನು ಚಲನ್ ಸಂಖ್ಯೆ: GN23104829, ದಿನಾಂಕ: 05.10.2023 ರಂದು ಒಟ್ಟು ರೂ. 2,25,96,000/- ಗಳನ್ನು ಪಾವತಿಸಿದ್ದು, ಅದರಂತೆ ದಿನಾಂಕ: 10.10.2023 ರಂದು ನಕ್ಷೆ ಮಂಜೂರಾತಿ ನೀಡಲಾಗಿರುತ್ತದೆ. ಪ್ರಸ್ತುತ ಮಂಜೂರಾತಿಯು ದಿನಾಂಕ: 10.10.2023 ರಿಂದ ದಿನಾಂಕ: 09.10.2025 ವರೆಗಿನ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ. ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಮಂಜೂರಾತಿ ನೀಡಲಾಗಿದೆ ಎಂದು ಈ ಮೂಲಕ ತಿಳಿಯಪಡಿಸಿದ್ದೇನೆ.

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಪುಟ ಸಂಖ್ಯೆ: 2 ಕ್ಕೆ ಮುಂದುವರೆದಿದೆ...

**ಷರತ್ತುಗಳು**

1) ಪ್ರಾಧಿಕಾರದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಪ್ರದರ್ಶಿಸತಕ್ಕದ್ದು.
2) ಸಂಬಂಧಪಟ್ಟ ಪ್ರಾಧಿಕಾರದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರಿಗೆ ಅರ್ಜಿ ಸಲ್ಲಿಸಿ ಪ್ರಾರಂಭ ಮಾಡಲು ಸೂಕ್ತ ಅನುಮತಿ ಪತ್ರ ಪಡೆಯತಕ್ಕದ್ದು.
3) ಮಂಜೂರಾತಿಯಾದ ನಕ್ಷೆಯ ಪ್ರಕಾರ ಕಟ್ಟಡ ನಿರ್ಮಾಣ ಮಾಡತಕ್ಕದ್ದು.
4) ಪೂರ್ಣಗೊಂಡ ಕಟ್ಟಡ ಅಥವಾ ಮನೆಯನ್ನು ವಾಸಕ್ಕೆ ಉಪಯೋಗಿಸುವ ಮೊದಲು ಸಂಬಂಧಪಟ್ಟ ಅಧಿಕಾರಿಗಳಿಂದ (ಪ್ರಾಧಿಕಾರದ) ವಾಸಯೋಗ್ಯ ಅನುಮತಿ ಪತ್ರವನ್ನು ಪಡೆಯತಕ್ಕದ್ದು.
5) ನಿವೇಶನದ ಸುತ್ತಳತೆಯಲ್ಲಿ ಹಸಿರು ಸಸಿಗಳನ್ನು ನೆಡುವುದು.
6) ಇವುಗಳೊಂದಿಗೆ ಈ ಪುಟದ ಹಿಂಬಾಗದಲ್ಲಿ ನಮೂದಿಸಿರುವ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

## -:ಷರತ್ತುಗಳು:-

1. ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಕೊಡತಿ ಗ್ರಾಮದ ಸರ್ವೆ ನಂ.60/1 ರಲ್ಲಿ 6 ಎಕರೆ - 39 ಗುಂಟೆ ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ಕಟ್ಟಡದ ನಕ್ಷೆಗೆ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಠರಾವು ಸಂಖ್ಯೆ.5.4.4/2022, ದಿನಾಂಕ:17-12-2022 ರಲ್ಲಿ ಅನುಮೋದಿಸಲಾಗಿದ್ದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾರ್ಯಾದೇಶ ಸಂಖ್ಯೆ.ಬೆಂಅಪ್ರಾ/ನಯೋಸ/DLP-07/2022-23/309/2023-24, ದಿನಾಂಕ:08-05-2023 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ಕಟ್ಟು ನಿಟ್ಟಾಗಿ ಪಾಲಿಸತಕ್ಕದ್ದು.
2. ಅನುಮೋದಿತ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ವಿವಿಧ ಉದ್ದೇಶಕ್ಕಾಗಿ ಗುರುತಿಸಿರುವ ಪ್ರದೇಶಗಳು ಅಂದರೆ ಉದ್ಯಾನವನ, ಸಿ.ಎ. ನಿವೇಶನ, ರಸ್ತೆಗಳು, ಸರ್ಫೇಸ್ ಪಾರ್ಕಿಂಗ್ ಪ್ರದೇಶಗಳನ್ನು ಬೇರೆ ಯಾವುದೇ ಉದ್ದೇಶಕ್ಕಾಗಿ ಬಳಸುವಂತಿಲ್ಲ.
3. ಅರ್ಜಿದಾರರು ಕಟ್ಟಡ ನಕ್ಷೆ ಮಂಜೂರಾತಿ ಸಮಯದಲ್ಲಿ ಬಾಕಿ ಇರುವ ಯಾವುದೇ ಅಭಿವೃದ್ಧಿ ಶುಲ್ಕ ಅಥವಾ ಇನ್ನಾವುದೇ ಶುಲ್ಕಗಳನ್ನು ಬಿಬಿಎಂಪಿ/ಬಿಡಿಎ ಸಂಸ್ಥೆಗಳಿಗೆ ಕಟ್ಟಡ ಪ್ರಾರಂಭಿಸುವ ಮೊದಲು ಸಂದಾಯ ಮಾಡತಕ್ಕದ್ದು.
4. ಬಂಡಿದಾರಿ/ರಾಜಕಾಲುವೆ/ಮಳೆನೀರು ಚರಂಡಿ ಇನ್ನೂ ಯಾವುದೇ ತರಹದ ಖರಾಬು ಜಮೀನು ಸದರಿ ಜಮೀನಿನ ವಿಸ್ತೀರ್ಣದಲ್ಲಿ ಇದ್ದಲ್ಲಿ ಆ ಪ್ರದೇಶವನ್ನು ಯಾವುದೇ ತರಹದ ನಿರ್ಮಾಣದ ಕಾರ್ಯವನ್ನು ಮಾಡುವಂತಿಲ್ಲ ಹಾಗೂ ಇತರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ ಮತ್ತು ಅಂತಹ ಪ್ರದೇಶಕ್ಕೆ ಸೂಕ್ತ ರಕ್ಷಣೆ ಒದಗಿಸುವುದು.
5. ಪ್ರಾಧಿಕಾರದಿಂದ ಕಟ್ಟಡ ನಕ್ಷೆ ಅನುಮೋದನೆ ಪಡೆದ ನಂತರ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಿಂದ ಕಟ್ಟಡ ಪರವಾನಿಗೆ (ಲೈಸೆನ್ಸ್) ಪಡೆಯುವುದು.
6. ಅರ್ಜಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯವನ್ನು ಕಡ್ಡಾಯವಾಗಿ ನಿರ್ಮಿಸುವುದು ಮತ್ತು ಶುಚಿತ್ವವನ್ನು ಕಾಪಾಡುವುದು. ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆ ಇಲ್ಲದೇ ರದ್ದುಗೊಳಿಸಲಾಗುವುದು.
7. ಪ್ರಾಧಿಕಾರದಿಂದ ಮಂಜೂರಾದ ಕಟ್ಟಡ ನಕ್ಷೆಯಂತೆಯೇ ಉದ್ದೇಶಿತ ಕಟ್ಟಡಕ್ಕೆ ನಡುಜಾಗಗಳನ್ನು ಬಿಟ್ಟು ಯಾವುದೇ ಉಲ್ಲಂಘನೆ ಮಾಡದೇ ಕಟ್ಟಡ ನಿರ್ಮಾಣವನ್ನು ಪೂರ್ಣಗೊಳಿಸುವ ಷರತ್ತಿಗೊಳಪಡಿಸಿದೆ. ತಪ್ಪಿದಲ್ಲಿ ಮಂಜೂರಾದ ನಕ್ಷೆಯನ್ನು ಯಾವುದೇ ಮುನ್ಸೂಚನೆ ನೀಡದೇ ರದ್ದುಪಡಿಸಲಾಗುವುದು ಹಾಗೂ ನಕ್ಷೆ ಮಂಜೂರಾತಿ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಪ್ರದರ್ಶಿಸತಕ್ಕದ್ದು
8. ಕಟ್ಟಡ ನಿರ್ಮಾಣ ಸಮಯದಲ್ಲಿ ಸುತ್ತಮುತ್ತಲಿನ ಪ್ರದೇಶಕ್ಕೆ ಅನಗತ್ಯ ಶಬ್ಧ ಮಾಲಿನ್ಯ ತಡೆಗಟ್ಟುವ ಸಂಬಂಧ ನಿರ್ಮಾಣದ ಹೊರಭಾಗಗಳಿಗೆ ಅಗತ್ಯ ರಕ್ಷಣಾ ಕವಚವನ್ನು ಕರ್ನಾಟಕ ರಾಜ್ಯ ವಾಯು ಮಾಲಿನ್ಯ ನಿಯಂತ್ರಣ ಮಂಡಳಿಯವರ ಸಲಹೆ ಪಡೆದು ಕಡ್ಡಾಯವಾಗಿ ಅಳವಡಿಸತಕ್ಕದ್ದು.

ಪುಟ ಸಂಖ್ಯೆ: 3 ಕ್ಕೆ ಮುಂದುವರೆದಿದೆ...

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

9. ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಅನುಮೋದಿಸುವ ಸಂದರ್ಭದಲ್ಲಿ ನಗರ ಯೋಜನಾ ವಿಭಾಗದವರು ವರದಿ ಮಾಡಿರುವಂತೆ, RMP-2015 ರ ವಲಯ ನಿಯಮಾವಳಿಯಂತೆ FAR ಅನ್ನು 2.25 ರವರೆಗೆ ಅನುಮತಿಸಬಹುದಾಗಿದ್ದು, ಅರ್ಜಿದಾರರು T.D.R ಮುಖಾಂತರ ಅಭಿವೃದ್ಧಿಪಡಿಸಲು ಪ್ರಸ್ತಾಪಿಸಿ DRC ಗಳನ್ನು ಸಲ್ಲಿಸಿದಲ್ಲಿ 2.25 ರಿಂದ 3.60 ವರೆಗೆ FAR ಅನ್ನು ಪರಿಗಣಿಸಬಹುದಾಗಿರುತ್ತದೆ
10. ಅರ್ಜಿದಾರರು ಪ್ರಶ್ನಿತ ಪ್ರದೇಶದಲ್ಲಿ ಕಾಮಗಾರಿ ಮುಕ್ತಾಯದ ನಂತರ ಉಪಯೋಗಕ್ಕೆ ಬಳಸುವ ಮುನ್ನ ಸ್ವಾಧೀನಾನುಭವ ಪತ್ರವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪಡೆಯುವುದು ಕಡ್ಡಾಯವಿರುತ್ತದೆ.
11. ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳಾದ SEIAA, KSPCB, BESCOM, ಅಗ್ನಿಶಾಮಕ ಇಲಾಖೆ, Airport Authority, BSNL ಇಲಾಖೆಗಳು ನೀಡಿದ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಿದ ಷರತ್ತುಗಳನ್ನು ಚಾಚೂ ತಪ್ಪದೇ ಪಾಲಿಸುವುದು. ತಪ್ಪಿದಲ್ಲಿ ಸ್ವಾಧೀನಾನುಭವ ಪತ್ರ (Occupation Certificate) ಪಡೆಯುವ ನಿಮ್ಮ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.
12. ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು.
13. ಸ್ವಾಭಾವಿಕವಾಗಿ ಇಳಿಜಾರಿನ ಕಡೆ ಹೋಗುವ ಮಳೆ ನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡುವುದು.
14. ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಸಿಕೊಂಡಿರುವುದು ತಿಳಿದು ಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ
15. ಕಟ್ಟಡ ನಕ್ಷೆಯಲ್ಲಿ Sewage Treatement Plant, Solid Waste Management, RWH, Transformer Yard ಗಳಿಗಾಗಿ ಸೂಕ್ತ ಜಾಗವನ್ನು ಗುರುತಿಸಿ Dual Pipe System ಅನ್ನು ಅಳವಡಿಸಿ KSPCB, BWSSB, BESCOM ರವರ ನಿರ್ದೇಶನದಂತೆ ಅಳವಡಿಸುವುದು.
16. ಕಟ್ಟಡ ಮಂಜೂರಾತಿಯ ಕುರಿತು ಕಾರ್ಮಿಕ ಇಲಾಖೆ ಅಥವಾ ಪ್ರಾಧಿಕಾರ, ನಿರ್ದೇಶನ ನೀಡಿದಲ್ಲಿ ಅರ್ಜಿದಾರರು ವ್ಯತ್ಯಾಸದ ಹಣವನ್ನು ಭರಿಸತಕ್ಕದ್ದು.
17. ಕಟ್ಟಡ ನಿರ್ಮಾಣ ವೆಚ್ಚವು ಪ್ರತೀ ಚದರ ಅಡಿಗೆ 650/- ಕ್ಕಿಂತ ಹೆಚ್ಚಾದಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಅಂದಾಜು ಮೊತ್ತದ ಶೇ 01 % ರಷ್ಟು ಮೊತ್ತವನ್ನು ಪ್ರಾಧಿಕಾರಕ್ಕೆ ಭರಿಸತಕ್ಕದ್ದು.
18. ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿಗಾಗಿ Sewage Treatment Plant ಸಹಿತ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. ಕುಡಿಯುವ ನೀರು ಸರಬರಾಜು ಕುರಿತು ವಿವರವಾದ ವರದಿಯನ್ನು ಸಲ್ಲಿಸುವುದು. ಕುಡಿಯುವ ನೀರು ಮತ್ತು ಇತರೆ ಉಪಯೋಗಗಳಿಗೆ Dual Piping System & ಒಳಚರಂಡಿ ವ್ಯವಸ್ಥೆ ಕಾಮಗಾರಿಯನ್ನು BWSSB ರವರ ನಿರ್ದೇಶನದಂತೆ ಅಳವಡಿಸುವುದು.
19. ಸದರಿ ಕಟ್ಟಡಕ್ಕೆ ವಿದ್ಯುತ್ ಛಕ್ತಿ ವ್ಯವಸ್ಥೆಯನ್ನು BESCOM ವತಿಯಿಂದ ಕಲ್ಪಿಸತಕ್ಕದ್ದು & ಅರ್ಜಿದಾರರು ಕಟ್ಟಡಕ್ಕೆ ಬೇಕಾದ ವಿದ್ಯುಚ್ಛಕ್ತಿಯ ಪರ್ಯಾಯ ವ್ಯವಸ್ಥೆಗಾಗಿ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು & ಕಟ್ಟಡದಲ್ಲಿ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸತಕ್ಕದ್ದು.
20. ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ಸಿದ್ಧಪಡಿಸಿ ವಿನ್ಯಾಸದಂತೆ ಕಾರ್ಯ ನಿರ್ವಹಿಸುವುದು.

ಪುಟ ಸಂಖ್ಯೆ: 4 ಕ್ಕೆ ಮುಂದುವರೆದಿದೆ...

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

Housiey.com

21. ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಭೂಮಿಯ ಒಳಗಡೆ ಎಲೆಕ್ಟ್ರಿಕಲ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು.
22. ಕಟ್ಟಡದ ಗುಣಮಟ್ಟ, ಸುರಕ್ಷತೆ ಹಾಗೂ ವಿನ್ಯಾಸಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಅಂಶಗಳ ಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ ಆಗಿರುತ್ತದೆ.
23. ಅರ್ಜಿದಾರರು Occupancy Certificate ಅನ್ನು ಪಡೆಯಲು ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸುವ ಸಮಯದಲ್ಲಿ ನೀರು ಸರಬರಾಜು ಕಾಮಗಾರಿಗಳು Sewage Treatment Plant ಹಾಗೂ Rain Water Harvesting ಅನ್ನು ನಿಯಮಕ್ಕನುಗುಣವಾಗಿ ನಿರ್ವಹಿಸಿರುವ ಬಗ್ಗೆ BWSSB ಯಿಂದ ದೃಢೀಕರಣ ಪತ್ರವನ್ನು ಸಲ್ಲಿಸುವುದು. ಹಾಗೆಯೇ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದಲೂ ಸಹ ಯೋಜನೆಯ ಸಮರ್ಪಕ ಅನುಷ್ಠಾನದ ಬಗ್ಗೆ ದೃಢೀಕರಣ ಪತ್ರವನ್ನು ಸಲ್ಲಿಸುವುದು.
24 ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (STP) ಮಂಜೂರಾದ ನಕ್ಷೆಯಲ್ಲಿ ತೋರಿಸಿದಂತೆ ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಪೂರ್ಣ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದ್ದಲ್ಲ.
25. ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶವು ಸೇರಿದಂತೆ ಅಭಿವೃದ್ಧಿ ಯೋಜನಾ ಪ್ರದೇಶದಲ್ಲಿ 240.00 ಚ ಮೀ FAR ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು.
26. ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ಹಾಗೂ Buffer ಪ್ರದೇಶದಲ್ಲಿ ವಿವಿಧ ಜಾತಿಯ ಮರಗಿಡಗಳನ್ನು ಬೆಳೆಸಿ ಅಭಿವೃದ್ಧಿಪಡಿಸುವುದು ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು. ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು.
27. ವಸತಿ ಕಟ್ಟಡ ನಕ್ಷೆಯಂತೆಯೇ ಘನ ತ್ಯಾಜ್ಯಗಳನ್ನು ಹಸಿ ತ್ಯಾಜ್ಯ, ಒಣತ್ಯಾಜ್ಯ ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.
28. ಕಾಮಗಾರಿ ಪ್ರಾರಂಭಿಸುವುದಕ್ಕಿಂತ ಪೂರ್ವದಲ್ಲಿ ಸಂಬಂಧಪಟ್ಟ ಇಲಾಖೆಯಿಂದ ಖಾತಾ ಪತ್ರ ಪಡೆಯುವುದು.
29. ಪ್ರಧಾನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ ಬೆಂಗಳೂರು ರವರ ದಿನಾಂಕ: 04-03-2006 ರಂದು ವಿಧಿಸಿದ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.
30. RERA ಅಧಿನಿಯಮ 2016 ಹಾಗೂ ಸಂಬಂಧಿಸಿದ ನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿ ಮಾಡಿಸುವುದು.
31. ಅರ್ಜಿದಾರರು ನೀರು ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅವಲಂಬಿಸದೇ ನೀರಿಗಾಗಿ ತಮ್ಮ ಸ್ವಂತ ವ್ಯವಸ್ಥೆ ಮಾಡಿಕೊಳ್ಳುವುದು.
32. ಅಭಿವೃದ್ಧಿದಾರರು ಬೆಟರ್ ಮೆಂಟ್ ತೆರಿಗೆ ಪಾವತಿಸುವ ಕುರಿತು ಮಾನ್ಯ ಉಚ್ಛ ನ್ಯಾಯಾಲಯದ ನೀಡುವ 45727-45730/2011 (ಬೆಂಅಪ್ರಾ), ದಿನಾಂಕ: 03.09.2012ರ ತೀರ್ಮಾನದ ವಿರುದ್ಧ ಪ್ರಾಧಿಕಾರವು ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿದ್ದು, ಮೇಲ್ಮನವಿಯ ಕುರಿತು ನ್ಯಾಯಾಲಯ ನೀಡುವ ತೀರ್ಪಿಗೆ ಬದ್ಧರಾಗಿರಲು ಷರತ್ತಿಗೆ ಒಳಪಡಿಸಲಾಗಿದೆ.
33. ಅರ್ಜಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಇನ್ನಾವುದೇ ಸಾಮಗ್ರಿಗಳಿಂದಾಗಲೀ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ಬ್ಯಾರಿಕೇಂಡಿಂಗ್ ವ್ಯವಸ್ಥೆ ಮಾಡಿಕೊಂಡು ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು, ತಪ್ಪಿದ್ದಲ್ಲಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.
34. ಅರ್ಜಿದಾರರು ನಕ್ಷೆ ಮಂಜೂರಾತಿ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ/ದಾಖಲಾತಿ ಸಲ್ಲಿಸಿರುವುದು ಕಂಡುಬಂದಲ್ಲಿ, ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ಮಂಜೂರಾದ ನಕ್ಷೆಯು ತನ್ನಿಂತಾನೆ ರದ್ದಾಗುವುದು ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮ ಜರುಗಿಸಲಾಗುವುದು.

ಪುಟ ಸಂಖ್ಯೆ: 5 ಕ್ಕೆ ಮುಂದುವರೆದಿದೆ...

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

35. ಗೌರವಾನ್ವಿತ ರಾಷ್ಟ್ರೀಯ ಹಸಿರು ನ್ಯಾಯಪೀಠ ರವರ ಪತ್ರ ಸಂಖ್ಯೆ: PCB/031/C&D/2016/5392/2020-21 ದಿನಾಂಕ: 25.02.2021 ರಂತೆ Construction and Demolition (C & D) ಕಸವನ್ನು ವಿಲೆ ಮಾಡುವ ಬಗ್ಗೆ ನಿರ್ವಹಣೆ ಯೋಜನೆಯನ್ನು ULB (Urban Local Body) ರವರಿಗೆ ಸಲ್ಲಿಸಿ ಅನುಮೋದನೆ ಪಡೆದು ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡುವ ಮುನ್ನ ಸಲ್ಲಿಸುವುದು.
36. ಕಟ್ಟಡ ನಿರ್ಮಾಣದ ಸಮಯದಲ್ಲಿ ಸೆಂಟ್ರಿಂಗ್ ಅಥವಾ ಇನ್ನಿತರೆ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದಲ್ಲಿ ಅದಕ್ಕೆ ಅರ್ಜಿದಾರರು ಸಂಪೂರ್ಣ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರಾತಿ ನೀಡಿದ ಇಲಾಖೆಯು ಜವಾಬ್ದಾರರಾಗಿರುವುದಿಲ್ಲ. ಆದುದರಿಂದ ನಿರ್ಮಾಣ ಸಮಯದಲ್ಲಿ ಎಲ್ಲಾ ಜಾಗ್ರತ / ಸುರಕ್ಷಿತ ಕ್ರಮಗಳನ್ನು ಕಟ್ಟುನಿಟ್ಟಾಗಿ ಅಳವಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ನೀಡಲಾಗಿರುವ ನಕ್ಷೆ ಮಂಜೂರಾತಿ ಯಾವ ಮುನ್ಸೂಚನೆ ಇಲ್ಲದೇ ರದ್ದುಗೊಳಿಸಲಾಗುವುದು.
37. ಬಫರ್ ವಲಯಕ್ಕೆ ಸಂಬಂಧಿಸಿದಂತೆ ಮಾನ್ಯ ಹಸಿರು ನ್ಯಾಯಾಧಿಕರಣವು (NGT) ಈಗಾಗಲೇ ಹೊರಡಿಸಿರುವ ನಿರ್ದೇಶನಗಳಿಗೆ ಮತ್ತು ಆಗಿಂದಾಗ್ಗೆ ಹೊರಡಿಸುವ / ವಿಧಿಸುವ ಯಾವುದೇ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು ಹಾಗೂ ಬಫರ್ ವಲಯಕ್ಕೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ಮಾಹಿತಿಯನ್ನು ನೀಡಿದಲ್ಲಿ ನಕ್ಷೆ ಮಂಜೂರಾತಿಯನ್ನು ರದ್ದುಪಡಿಸುವ ಷರತ್ತಿಗೆ ಒಳಪಟ್ಟಿದೆ.
38. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಷರತ್ತುಗಳಿಗೆ ಅರ್ಜಿದಾರರು ಭದ್ಧರಾಗಿರತಕ್ಕದ್ದು.

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಯಥಾಪ್ರತಿಯನ್ನು ಕಾರ್ಯಪಾಲಕ ಅಭಿಯಂತರು, ಪೂರ್ವ ವಿಭಾಗ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಹೆಚ್.ಎಸ್.ಆರ್. ಬಡಾವಣೆ, ಬೆಂಗಳೂರು ರವರ ಮಾಹಿತಿಗಾಗಿ ರವಾನಿಸಿದೆ.

Housiey.com

Housiey.com